2) *ಹಾಗಿದ್ದಲ್ಲಿ ಎಷ್ಟು ಹಣ ಒದಗಿಸಲಾಗಿದೆ?*

3) *ಈಗಿರುವ ಹಳೆ ಕಟ್ಟಡದ ಬದಲು ಸುಸಜ್ಜಿತವಾದ ಕಟ್ಟಡ ಮತ್ತು ಅವಶ್ಯವಿರುವ ವೈದ್ಯೋಪಕರಣಗಳನ್ನು ಒದಗಿಸಲಾಗುವುದೇ?*

ಶ್ರೀ ಹೆಚ್. ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ) :

ಅ) ಹೌದು

ಆ) ರೂ. 42,20,000/- (ಸಿವಿಲ್ ಕಾಮಗಾರಿಗಳಿಗಾಗಿ)

ಇ) ಈಗಿರುವ ಹಳೆ ಕಟ್ಟಡವನ್ನು ಜೀರ್ಣೋದ್ಧಾರ ಮಾಡಲಾಗುವುದು ಹಾಗೂ ಆಸ್ಪತ್ರೆಯ ಸಿಬ್ಬಂದಿ ವರ್ಗಕ್ಕೆ ಈಗಿರುವ ವಸತಿ ಗೃಹಗಳ ಜೊತೆಗೆ ಅಗತ್ಯವಿರುವ ವಸತಿ ಗೃಹಗಳನ್ನು ಸಹ ಕಟ್ಟಲಾಗುವುದು. ಈ ಕಾಮಗಾರಿಯನ್ನು ಯೋಜನೆಯ ಎರಡನೇ ಹಂತದಲ್ಲಿ ಕೈಗೊಳ್ಳಲು ನಿರ್ಧರಿಸಿದ್ದು, ಈಗಾಗಲೇ ಈ ಬಗ್ಗೆ ಪ್ರಾರಂಭಿಕ ನೀಲ ನಕ್ಷೆಗಳನ್ನು ತಯಾರಿಸಲಾಗುತ್ತಿದೆ. ವಿಶ್ವಬ್ಯಾಂಕ್‌ನಿಂದ ಅನುಮೋದಿಸಲ್ಪಟ್ಟ ಯೋಜನಾ ಪ್ರಸ್ತಾವನೆಯಲ್ಲಿ ಅಳವಡಿಸಿದಂತೆ ಆಸ್ಪತ್ರೆಗೆ ಅಗತ್ಯವಿರುವ ವೈದ್ಯ ಹಾಗೂ ಸಿಬ್ಬಂದಿ ವರ್ಗ ಮತ್ತು ವೈದ್ಯೋಪಕರಣಗಳನ್ನು ಸಹ ಯೋಜನೆಯ ನಿಧಿಯಿಂದ ಒದಗಿಸಲಾಗುವುದು.

ಬೈಂದೂರು ಕ್ಷೇತ್ರಕ್ಕೆ ಹೊಸ ಪ್ರೌಢ ಶಾಲೆಗಳ ಮಂಜೂರಾತಿ

2164 - ಶ್ರೀ ಐ.ಎಂ. ಜಯರಾಮಶೆಟ್ಟಿ (ಬೈಂದೂರು) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಬೈಂದೂರು ವಿಧಾನಸಭಾ ಕ್ಷೇತ್ರಗಳಲ್ಲಿ ಜನಸಂಖ್ಯೆಗೆ ಅನುಗುಣವಾಗಿ ಎಷ್ಟು ಪ್ರೌಢಶಾಲೆಗಳು ಅವಶ್ಯಕತೆ ಇವೆ?*

ಆ) *ಬೈಂದೂರು ವಿಧಾನಸಭಾ ಕ್ಷೇತ್ರದ ಎಷ್ಟು ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಪ್ರೌಢಶಾಲೆಗಳಿಲ್ಲ, ಸದರಿ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಮತ್ತು ಅವಶ್ಯವಿರುವ ಪ್ರದೇಶಗಳಲ್ಲಿ ಈ ಸಾಲಿನಲ್ಲಿ ಪ್ರೌಢಶಾಲೆ ತೆರೆಯಲಾಗುವುದೇ?*

ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು) :

ಅ) ಜನಸಂಖ್ಯೆಗೆ ಅನುಗುಣವಾಗಿ ಪ್ರೌಢಶಾಲೆಗಳನ್ನು ಮಂಜೂರು ಮಾಡುವುದಿಲ್ಲ. ಆದರೆ ಅಗತ್ಯತೆಗೆ ಅನುಗುಣವಾಗಿ ಶಾಲೆಗಳನ್ನು ಮುಂಜೂರು ಮಾಡಲಾಗುವುದು. 5 ಕಿ.ಮೀ. ವಿಸ್ತೀರ್ಣದಲ್ಲಿ ಒಂದು ಪ್ರೌಢಶಾಲೆ ಇರಬೇಕೆಂಬುದು ಅದರ ನೀತಿಯಾಗಿರುತ್ತದೆ.

ಆ) ಪ್ರಸಕ್ತ ಸಾಲಿನಲ್ಲಿ ಹೊಸ ಸರ್ಕಾರಿ ಪ್ರೌಢ ಶಾಲೆಗಳನ್ನು ತೆರೆಯಲು ಆಯವ್ಯಯ ಅವಕಾಶ ಮಾಡಿಕೊಂಡಿಲ್ಲ. ಹಿಂದಿನ ವರ್ಷಗಳ ಮಂಜೂರಾಗಿರುವ ಪ್ರೌಢಶಾಲೆಗಳಿಗೆ ಅಗತ್ಯವಾದ

ಶಿಕ್ಷಕರು, ಕಟ್ಟಡ ಮತ್ತು ಇತರೆ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಗುರಿ ಹೊಂದಲಾಗಿದೆ. ಆದ್ದರಿಂದ ಈ ವರ್ಷ ಯಾವುದೇ ಹೊಸ ಸರ್ಕಾರಿ ಪ್ರೌಢಶಾಲೆಗಳನ್ನು ತೆರೆಯಲು ಸಾಧ್ಯವಿಲ್ಲ.

ಹುಬ್ಬಳ್ಳಿ ಗ್ರಾಮೀಣ ಕ್ಷೇತ್ರದ ಗೋಪನಕೊಪ್ಪ ಪದವಿ ಪೂರ್ವ ಕಾಲೇಜಿನ ಕಟ್ಟಡ ಕುರಿತು

2165 - ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ ಗ್ರಾಮೀಣ ಕ್ಷೇತ್ರದ ಗೋಪನಕೊಪ್ಪ ಪದವಿ ಪೂರ್ವ ಕಾಲೇಜಿಗೆ ಸ್ವಂತ ಕಟ್ಟಡವಿಲ್ಲದೆ ವಿದ್ಯಾರ್ಥಿಗಳು ಬಹಳಷ್ಟು ತೊಂದರೆ ಅನುಭವಿಸುತ್ತಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದರೆ ಸದರಿ ಕಾಲೇಜಿಗೆ ಸ್ವಂತ ಕಟ್ಟಡ ಒದಗಿಸುವ ಸಲುವಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು) :

ಅ) ಈ ಕಾಲೇಜು ಸಂಯುಕ್ತ ಕಿರಿಯ ಕಾಲೇಜಾಗಿರುವುದರಿಂದ, ಇದು ಪ್ರೌಢ ಶಾಲೆಯ ಕಟ್ಟಡದಲ್ಲಿಯೇ ನಡೆಯುತ್ತಿದೆ.

ಆ) ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಹೆಚ್ಚುವರಿ ಕೊಠಡಿಗಳ ಅವಶ್ಯಕತೆ ಇದ್ದಲ್ಲಿ ನಿರ್ಮಾಣ ಮಾಡುವ ಬಗ್ಗೆ ಹಣಕಾಸಿನ ಲಭ್ಯತೆಗೆ ಒಳಪಟ್ಟು ಕ್ರಮ ತೆಗೆದುಕೊಳ್ಳಲಾಗುವುದು.

ಹುಬ್ಬಳ್ಳಿಯ ಕೆ.ಎಂ.ಸಿ ಕಾಲೇಜು ಸಿಬ್ಬಂದಿಯ ಸೇವಾ ಭದ್ರತೆಯ ಕುರಿತು

2166 - ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ ಮಹಾನಗರದಲ್ಲಿರುವ ಕರ್ನಾಟಕ ಮೆಡಿಕಲ್ ಕಾಲೇಜನ್ನು (ಕೆಎಂಸಿ) ಇತ್ತೀಚೆಗೆ ಸರ್ಕಾರವು ಕಿಮ್ಸ್ ಎಂಬ ಹೆಸರಿನಿಂದ ಸ್ವಾಯತ್ತ ಸಂಸ್ಥೆಯನ್ನಾಗಿ ಪರಿವರ್ತಿಸಿದ ಮೇಲೆ ಅಲ್ಲಿಯ ನೌಕರರ ಮತ್ತು ಕಾರ್ಮಿಕ ವರ್ಗಕ್ಕೆ ತಮ್ಮ ಸೇವೆಯ ಭದ್ರತೆಯ ಕುರಿತು ಭಯ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಅವರ ಸೇವಾ ಭದ್ರತೆಗೆ ಯಾವುದೇ ರೀತಿಯ ಧಕ್ಕೆ ಆಗದ ರೀತಿಯಲ್ಲಿ ಅವರ ಭಯ ನಿವಾರಣೆಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ?

ಡಾ ॥ ಎಂ. ಶಂಕರ್‌ನಾಯಕ್ (ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು) :

ಅ) ಕರ್ನಾಟಕ ವೈದ್ಯಕೀಯ ಮಹಾವಿದ್ಯಾಲಯದ ಆಸ್ಪತ್ರೆಯ ನೌಕರರರು ದಿನಾಂಕ 30.6.97 ರವರೆಗೆ ಖಜಾನೆಯಿಂದ ವೇತನವನನ್ನು ಪಡೆದಿರುತ್ತಾರೆ. ಜುಲೈ 1997ರ ವೇತನವನ್ನು